ಪಾಲಿಕೆಯ ಮುಖ್ಯ ಆಡಳಿತ ಕಛೇರಿಯ ಛಾವಣಿ ಮೇಲೆ 16.5 ಕಿಲೋ ವ್ಯಾಟ್ ಹಾಗೂ ಕೌನ್ಸಿಲ್ ಕಟ್ಟಡದ ಛಾವಣಿಯ ಮೇಲೆ 50 ಕಿಲೋ ವ್ಯಾಟ್, ಶಕ್ತಿಯ ಫೋಟೊ-ವೊಪ್ಟಾ ಇಕ್ ಸೆಲ್ ಸೌರಯಂತ್ರ ಅಡವಡಿಸಲು ಉದ್ದೇಶಿಸಿದ್ದು ಪ್ರಸ್ತಾವನೆಯ ವಿವರಗಳು ಈ ಕೆಳಕಂಡಂತೆ ಇದೆ.

| Description | BBMP Main Building | Council Building |
|---|---|---|
| **Capacity** | 16.5kWp | 50kWp |
| **Annual Energy** | 19500 units/year fed into the grid | 62686 units/ year fed into the grid |
| **Plant load factor** | 20% | 20% |
| **Scope of work** | Design, Supply, Install & Commission the plant | Design, Supply, Install & Commission the plant |
| **Period of execution** | 12-18 weeks | 12-18 weeks |
| **Bill of Materials:** | | |
| Solar Array Capacity (165wp rated high efficiency Multy crystalline Modules | 100 Nos. | 320 Nos. |
| Solar Modules Mounting Structure | 1 Set of 10 Nos | 1 Set of 32 Nos. |
| Power Conditioning Unit | 1 No. od 16.5 kWp (240 V DC input, 415 V, 3 phase, 50 Hz output), IP 21 enclosure | 1 No. od 50kWp (240 V DC input, 415 V, 3 phase, 50 Hz output), IP 21 enclosure |
| Monitoring System (Data Logging) with PC and accessories | 1No. | 1No. |
| Array Junction Boxes | 1 Set of 5 Nos. | 1 Set of 16 Nos. |
| Cables & Earthing materials | 10 Sets | 10 Sets |
| Metering Panel with A, V and Energy meter | 1 No. | 1 No. |
| Isolator Panel with switch fuse unit on AC side | 1 Set | 1 Set |
| Distribution Panels | 1 Set | 1 Set |
| Lightening Arrestors | 4 Nos. | 4 Nos. |
| **Others** | | |
| Control Room | (200sft) 1No. | (200sft) 1No. |
| Freight | (3 FTL) 1 No. | (5 FTL) 1 No. |
| Cost of Storage Security | 1 set | 1 set |
| Installation & Commissioning | 1 No. | 1 No. |
| **Estimated Cost for above** | 60 lakhs | 165 lakhs |

ಮೇಲಿನ ಪ್ರಸ್ತಾವನೆಯ ಅಳವಡಿಕೆಯಿಂದ ಪಾಲಿಕೆಯು ಪರಿಸರ ಸ್ನೇಹಿ ಯೋಜನೆಯ ಅಳವಡಿಕೆಯಲ್ಲಿ ಪ್ರ-ಪ್ರಥಮ ಸಂಸ್ಥೆ ಮತ್ತು ಇತರರಿಗೆ ಮೇಲ್ಪಂಕ್ತಿಯಾಗುವುದರಿಂದ ಸದರಿ ಪ್ರಸ್ತಾವನೆಗೆ ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿದ್ದು, ಈ ಕೆಳಕಂಡ ಅಂಶಗಳಿಗೆ ಅನುಮೋದನೆ ಕೋರಿದೆ.

1. ಟರ್ನ್ ಕೀ ಆಧಾರದ ಮೇಲೆ ಈ ಕೆಳಕಂಡಂತೆ ಟೆಂಡರ್ ಕರೆಯಲು ಅನುಮೋದನೆ.

    i) ಪಾಲಿಕೆಯ ಮುಖ್ಯ ಆಡಳಿತ ಕಛೇರಿಯ ಛಾವಣಿಯ ಮೇಲೆ 16.5 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ 60.00 ಲಕ್ಷಗಳಿಗೆ ಟರ್ನ್ ಕೀ ಆಧಾರದ ಮೇಲೆ ನುರಿತ ಗುತ್ತಿಗೆದಾರ ಸಂಸ್ಥೆಯಿಂದ ವಿನ್ಯಾಸ, ಸರಬರಾಜು, ಅಳವಡಿಸುವುದು ನಿರೂಪಣೆ, ಕಾರ್ಯ ಮತ್ತು ನಿರ್ವಹಣೆಯನ್ನು 15 ವರ್ಷಗಳ ತನಕ ನಿರ್ವಹಿಸಲು ನಿಬಂಧನೆ ವಿಧಿಸಿ ಕರ್ನಾಟಕ ಪಾರದರ್ಶಕ ಅಧಿನಿಯಮದ ಅಡಿ ಟೆಂಡರ್ ಕರೆಯಲು ಅನುಮೋದನೆ.

    ii) ಪಾಲಿಕೆಯ ಕೌನ್ಸಿಲ್ ಕಟ್ಟಡದ ಮೇಲೆ 50 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.165.00 ಲಕ್ಷಗಳಿಗೆ ಟರ್ನ್ ಕೀ ಆಧಾರದ ಮೇಲೆ ನುರಿತ ಗುತ್ತಿಗೆದಾರ ಸಂಸ್ಥೆಯಿಂದ ವಿನ್ಯಾಸ, ಸರಬರಾಜು, ಅಳವಡಿಸುವುದು, ನಿರೂಪಣೆ, ಕಾರ್ಯ ಮತ್ತು ನಿರ್ವಹಣೆಯನ್ನು 15 ವರ್ಷಗಳ ತನಕ ನಿರ್ವಹಿಸಲು ನಿಬಂಧನೆ ವಿಧಿಸಿ ಕರ್ನಾಟಕ ಪಾರದರ್ಶಕ ಅಧಿನಿಯಮದ ಅಡಿ ಟೆಂಡರ್ ಕರೆಯಲು ಅನುಮೋದನೆ

2. ಸೌರ ಶಕ್ತಿ ಉತ್ಪಾದಿಸುವ ಸೌರಯಂತ್ರಗಳನ್ನು ಅಳಡಿಸುವ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ.

    i) ಪಾಲಿಕೆ ಮುಖ್ಯ ಆಡಳಿತ ಕಛೇರಿಯ ಛಾವಣಿಯ ಮೇಲೆ 16.5 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.60.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ.

    ii) ಪಾಲಿಕೆಯ ಕೌನ್ಸಿಲ್ ಕಟ್ಟಡದ ಮೇಲೆ 50 ಕಿ.ವ್ಯಾಟ್. ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.165.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಘನ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಅನುಮೋದನೆ.

ಮೇಲ್ಕಂಡ ಅಂಶಗಳಿಗೆ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:28/02/2008 ರ ಟಿಪ್ಪಣಿ.

<u>ತೀರ್ಮಾನ:</u> ಆಯುಕ್ತರವರ ದಿನಾಂಕ:28/02/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು.

1. ಟರ್ನ್ ಕೀ ಆಧಾರದ ಮೇಲೆ ಈ ಕೆಳಕಂಡಂತೆ ಟೆಂಡರ್ ಕರೆಯಲು ಅನುಮೋದನೆ.

   i) ಪಾಲಿಕೆಯ ಮುಖ್ಯ ಆಡಳಿತ ಕಛೇರಿಯ ಛಾವಣಿಯ ಮೇಲೆ 16.5 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ 60.00 ಲಕ್ಷಗಳಿಗೆ ಟರ್ನ್ ಕೀ ಆಧಾರದ ಮೇಲೆ ನುರಿತ ಗುತ್ತಿಗೆದಾರ ಸಂಸ್ಥೆಯಿಂದ ವಿನ್ಯಾಸ, ಸರಬರಾಜು, ಅಳವಡಿಸುವುದು ನಿರೂಪಣೆ, ಕಾರ್ಯ ಮತ್ತು ನಿರ್ವಹಣೆಯನ್ನು 15 ವರ್ಷಗಳ ತನಕ ನಿರ್ವಹಿಸಲು ನಿಬಂಧನೆ ವಿಧಿಸಿ ಕರ್ನಾಟಕ ಪಾರದರ್ಶಕ ಅಧಿನಿಯಮದ ಅಡಿ ಟೆಂಡರ್ ಕರೆಯಲು ಅನುಮೋದನೆ.

   ii) ಪಾಲಿಕೆಯ ಕೌನ್ಸಿಲ್ ಕಟ್ಟಡದ ಮೇಲೆ 50 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.165.00 ಲಕ್ಷಗಳಿಗೆ ಟರ್ನ್ ಕೀ ಆಧಾರದ ಮೇಲೆ ನುರಿತ ಗುತ್ತಿಗೆದಾರ ಸಂಸ್ಥೆಯಿಂದ ವಿನ್ಯಾಸ, ಸರಬರಾಜು, ಅಳವಡಿಸುವುದು, ನಿರೂಪಣೆ, ಕಾರ್ಯ ಮತ್ತು ನಿರ್ವಹಣೆಯನ್ನು 15 ವರ್ಷಗಳ ತನಕ ನಿರ್ವಹಿಸಲು ನಿಬಂಧನೆ ವಿಧಿಸಿ ಕರ್ನಾಟಕ ಪಾರದರ್ಶಕ ಅಧಿನಿಯಮದ ಅಡಿ ಟೆಂಡರ್ ಕರೆಯಲು ಅನುಮೋದನೆ

2. ಸೌರ ಶಕ್ತಿ ಉತ್ಪಾದಿಸುವ ಸೌರಯಂತ್ರಗಳನ್ನು ಅಳಡಿಸುವ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ.

   i) ಪಾಲಿಕೆ ಮುಖ್ಯ ಆಡಳಿತ ಕಛೇರಿಯ ಛಾವಣಿಯ ಮೇಲೆ 16.5 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.60.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ.

   ii) ಪಾಲಿಕೆಯ ಕೌನ್ಸಿಲ್ ಕಟ್ಟಡದ ಮೇಲೆ 50 ಕಿ.ವ್ಯಾಟ್. ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.165.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಘನ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಅನುಮೋದನೆ.

ಮೇಲ್ಕಂಡ ಆಂಶಗಳಿಗೆ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:28/02/2008 ರ ಟಿಪ್ಪಣಿ.

<u>ತೀರ್ಮಾನ:</u> ಆಯುಕ್ತರವರ ದಿನಾಂಕ:28/02/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



1. ಟರ್ನ್ ಕೀ ಆಧಾರದ ಮೇಲೆ ಈ ಕೆಳಕಂಡಂತೆ ಟೆಂಡರ್ ಕರೆಯಲು ಅನುಮೋದನೆ.

   i) ಪಾಲಿಕೆಯ ಮುಖ್ಯ ಆಡಳಿತ ಕಛೇರಿಯ ಛಾವಣಿಯ ಮೇಲೆ 16.5 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ 60.00 ಲಕ್ಷಗಳಿಗೆ ಟರ್ನ್ ಕೀ ಆಧಾರದ ಮೇಲೆ ನುರಿತ ಗುತ್ತಿಗೆದಾರ ಸಂಸ್ಥೆಯಿಂದ ವಿನ್ಯಾಸ, ಸರಬರಾಜು, ಅಳವಡಿಸುವುದು ನಿರೂಪಣೆ, ಕಾರ್ಯ ಮತ್ತು ನಿರ್ವಹಣೆಯನ್ನು 15 ವರ್ಷಗಳ ತನಕ ನಿರ್ವಹಿಸಲು ನಿಬಂಧನೆ ವಿಧಿಸಿ ಕರ್ನಾಟಕ ಪಾರದರ್ಶಕ ಅಧಿನಿಯಮದ ಅಡಿ ಟೆಂಡರ್ ಕರೆಯಲು ಅನುಮೋದನೆ.

   ii) ಪಾಲಿಕೆಯ ಕೌನ್ಸಿಲ್ ಕಟ್ಟಡದ ಮೇಲೆ 50 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.165.00 ಲಕ್ಷಗಳಿಗೆ ಟರ್ನ್ ಕೀ ಆಧಾರದ ಮೇಲೆ ನುರಿತ ಗುತ್ತಿಗೆದಾರ ಸಂಸ್ಥೆಯಿಂದ ವಿನ್ಯಾಸ, ಸರಬರಾಜು, ಅಳವಡಿಸುವುದು, ನಿರೂಪಣೆ, ಕಾರ್ಯ ಮತ್ತು ನಿರ್ವಹಣೆಯನ್ನು 15 ವರ್ಷಗಳ ತನಕ ನಿರ್ವಹಿಸಲು ನಿಬಂಧನೆ ವಿಧಿಸಿ ಕರ್ನಾಟಕ ಪಾರದರ್ಶಕ ಅಧಿನಿಯಮದ ಅಡಿ ಟೆಂಡರ್ ಕರೆಯಲು ಅನುಮೋದನೆ

2. ಸೌರ ಶಕ್ತಿ ಉತ್ಪಾದಿಸುವ ಸೌರಯಂತ್ರಗಳನ್ನು ಅಳಡಿಸುವ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ.

   i) ಪಾಲಿಕೆ ಮುಖ್ಯ ಆಡಳಿತ ಕಛೇರಿಯ ಛಾವಣಿಯ ಮೇಲೆ 16.5 ಕಿ.ವ್ಯಾಟ್ ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.60.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ.

   ii) ಪಾಲಿಕೆಯ ಕೌನ್ಸಿಲ್ ಕಟ್ಟಡದ ಮೇಲೆ 50 ಕಿ.ವ್ಯಾಟ್. ಸಾಮರ್ಥ್ಯದ ಸೌರಶಕ್ತಿ ಉತ್ಪಾದಿಸುವ ಸೌರ ಯಂತ್ರಗಳನ್ನು ಅಳವಡಿಸುವ ಅಂದಾಜು ಮೊತ್ತವಾದ ರೂ.165.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಘನ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಅನುಮೋದನೆ.

ಮೇಲ್ಕಂಡ ಆಂಶಗಳಿಗೆ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:28/02/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:28/02/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು

ವಿಷಯದ ಸಂಖ್ಯೆ:297/2008-09

Providing Improvements road side drain & footpath & Providing RMC to 80 ft road Nehru road, Girinagar in Ward No.54 ರ ಕಾಮಗಾರಿ ಬಗ್ಗೆ.

ಪ್ರಸ್ತಾವನೆ:

Providing Improvements road side drain & footpath & Providing RMC to 80 ft road Nehru road, Girinagar in Ward No.54 ರ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಬಸವನಗುಡಿ-2) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತವೆ. ಕಾರ್ಯಪಾಲಕ ಅಭಿಯಂತರರು (ಬಸವನಗುಡಿ-2) ರವರು ಕನಿಷ್ಠ ಟೆಂಡರ್‌ದಾರರಾದ ಶ್ರೀ.ಜಿ.ಯಶೋಕುಮಾರ್, ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.92.00 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007-08ನೇ ಸಾಲಿನ ದರಪಟ್ಟಿಯ ಆಧಾರದ ಮೇಲೆ ಕಾರ್ಯಪಾಲಕ ಅಭಿಯಂತರರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನಿರೀಕ್ಷಿಸಿ ಟೆಂಡರ್ ಕರೆದಿರುತ್ತಾರೆ. ಸದರಿ ಕಾಮಗಾರಿಯ ಟೆಂಡರ್‌ಗಿಟ್ಟ ಮೊಬಲಗು ರೂ.91,34,418.07 ಗಳಾಗಿದ್ದು, ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ.ಜಿ.ಯಶೋಕುಮಾರ್ ರವರು ಶೇಕಡ 30.50% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಠ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಬಸವನಗುಡಿ-2) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ, ಗುತ್ತಿಗೆದಾರರು ಸಂಧಾನದ ನಂತರ ನಮೂದಿಸಿದ ಶೇಕಡ 17.75% ರಷ್ಟು ಹೆಚ್ಚುವರಿ ದರಗಳು ಸಮಪರ್ಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಸಿಮೆಂಟಿನ ವ್ಯತ್ಯಾಸದ ದರವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.99% ರಷ್ಟು ಹೆಚ್ಚುವರಿ ದರಗಳನ್ನು ನೀಡಿದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಿದ್ಧನಿರುತ್ತೇನೆಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ದಕ್ಷಿಣ) ರವರು ಶಿಫಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತ (ಟೆಂಡರ್ ಪ್ರೀಮಿಯಂ ಸೇರಿ) ರೂ.1,07,55,742.22 ಗಳಾಗಿದ್ದು, ಸರ್ಕಾರದ ಆದೇಶ ಸಂಖ್ಯೆ:ಯುಡಿಡಿ/116/ಎಹೆಚ್‌ಡಿ/2002, ದಿನಾಂಕ:24/01/2003 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ, ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಸರ್ಕಾರ ತಂದಿದ್ದು; ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಡಳಿತಗಾರ ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ.ಜಿ.ಯಶೋಕುಮಾರ್ ರವರು 2007-08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಸಿಮೆಂಟಿನ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.99% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.1,07,55,742.22 (ರೂ.ಒಂದು ಕೋಟಿ ಏಳು ಲಕ್ಷದ ಐವತ್ತೈದು ಸಾವಿರದ ಏಳು ನೂರ ನಲವತ್ತೆರಡು ಪೈಸೆ ಇಪ್ಪತ್ತೆರಡು ಮಾತ್ರ) ಗಳ ಟೆಂಡರ್ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:25/06/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:25/06/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು

**ವಿಷಯದ ಸಂಖ್ಯೆ:336/2008–09**

Providing and laying concrete to footpath and drain improvement in 4th cross roads of OMBR Layout in Ward No.84 ರ ಕಾಮಗಾರಿ ಬಗ್ಗೆ.

**ಪ್ರಸ್ತಾವನೆ:**

Providing and laying concrete to footpath and drain improvement in 4th cross roads of OMBR Layout in Ward No.84 ರ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತವೆ. ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಕನಿಷ್ಠ ಟೆಂಡರ್‌ದಾರರಾದ ಶ್ರೀ.ಎಲ್.ಗಂಗಾಧರ್, ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.95.80 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007–08ನೇ ಸಾಲಿನ ದರಪಟ್ಟಿಯ ಆಧಾರದ ಮೇಲೆ ಮುಖ್ಯ ಅಭಿಯಂತರರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು, ಟೆಂಡರ್‌ಗಿಟ್ಟ ಮೊಬಲಗು ರೂ.95,79,605.00 ಗಳಾಗಿದ್ದು, ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ.ಎಲ್.ಗಂಗಾಧರ್ ರವರು ಶೇಕಡ 42.92% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಠ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ, ಗುತ್ತಿಗೆದಾರರು ಸಂಧಾನದ ನಂತರ ನಮೂದಿಸಿದ ಶೇಕಡ 35.19% ರಷ್ಟು ಹೆಚ್ಚುವರಿ ದರಗಳು ಸಮಪರ್ಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಸಿಮೆಂಟ್‌ನ ವ್ಯತ್ಯಾಸದ ದರವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.50% ರಷ್ಟು ಹೆಚ್ಚುವರಿ ದರಗಳಲ್ಲಿ ನಿಗದಿತ ಕಾಮಗಾರಿಯನ್ನು ನಿರ್ವಹಿಸಲು ಸಿದ್ದನಿರುತ್ತೇನೆಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಪೂರ್ವ) ರವರು ಶಿಫಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತ (ಟೆಂಡರ್ ಪ್ರೀಮಿಯಂ ಸೇರಿ) ರೂ.1,29,50,854.00 ಗಳಾಗಿದ್ದು, ಸರ್ಕಾರದ ಆದೇಶ ಸಂಖ್ಯೆ:ಯುಡಿಡಿ/116/ಎಹೆಚ್‌ಡಿ/2002, ದಿನಾಂಕ:24/01/2003 ರಲ್ಲಿ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ, ನಿಯಮಗಳು 1977 ನಿಯಮ [illegible] ತಿದ್ದುಪಡಿಯನ್ನು, ಸರ್ಕಾರ ತಂದಿದ್ದು, ಇದರಂತೆ ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಯುಕ್ತರು/ಆಡಳಿತಗಾರರು ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ.ಎಲ್.ಗಂಗಾಧರ್, ರವರು 2007–08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಸಿಮೆಂಟಿನ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.50% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.1,29,50,854.00 (ರೂ.ಒಂದು ಕೋಟಿ ಇಪ್ಪತ್ತೊಂಭತ್ತು ಲಕ್ಷದ ಐವತ್ತು ಸಾವಿರದ ಎಂಟು ನೂರ ಐವತ್ತನಾಲ್ಕು ಮಾತ್ರ) ಗಳ ಟೆಂಡರ್ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:15/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು

ವಿಷಯದ ಸಂಖ್ಯೆ:337/2008-09

Improvements to Lakshmipuram Main Road and Cross in Ward No.82 ರ ಕಾಮಗಾರಿ ಬಗ್ಗೆ.

ಪ್ರಸ್ತಾವನೆ:

Improvements to Lakshmipuram Main Road and Cross in Ward No.82 ರ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತವೆ. ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಕನಿಷ್ಟ ಟೆಂಡರ್‌ದಾರರಾದ ಶ್ರೀ.ಎನ್.ಕೆಂಪರಾಜು ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.90.00 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007-08ನೇ ಸಾಲಿನ ದರ ಪಟ್ಟಿಯ ಆಧಾರದ ಮೇಲೆ ಮುಖ್ಯ ಅಭಿಯಂತರರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು, ಟೆಂಡರ್‌ಗಿಟ್ಟ ಮೊಬಲಗು ರೂ.89,95,948.00 ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ.ಎನ್.ಕೆಂಪರಾಜು ರವರು ಶೇಕಡ 38.08% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಠ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ ಗುತ್ತಿಗೆದಾರರು ಸಂಧಾನದ ನಂತರ ನಮೂದಿಸದ ಶೇಕಡ 24.83% ರಷ್ಟು ಹೆಚ್ಚುವರಿ ದರಗಳು ಸಮರ್ಪಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಸಿಮೆಂಟ್‌ನ ವ್ಯತ್ಯಾಸದ ದರವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.50% ರಷ್ಟು ಹೆಚ್ಚುವರಿ ದರಗಳನ್ನು ನೀಡಿದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಿದ್ಧನಿರುತ್ತೇನೆ ಎಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಪೂರ್ವ) ರವರು ಶಿಫಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತವು (ಟೆಂಡರ್ ಪ್ರೀಮಿಯಂ ಸೇರಿ) ರೂ.1,12,29,400.00 ಗಳಾಗಿದ್ದು ಸರ್ಕಾರದ ಆದೇಶ ಸಂಖ್ಯೆ ಯು.ಡಿ.ಡಿ/116/ಎಹೆಚ್‌ಡಿ/2002 ದಿನಾಂಕ: 24-01-2003 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಸರ್ಕಾರ ತಂದಿದ್ದು ಇದರಂತೆ ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಯುಕ್ತರು / ಆಡಳಿತಗಾರರ ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ.ಎನ್.ಕೆಂಪರಾಜು ರವರು 2007-08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಸಿಮೆಂಟ್ ಮತ್ತು ಬಿಟುಮಿನ್ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.50% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.1,12,29,400.00 (ರೂ.ಒಂದು ಕೋಟಿ ಹನ್ನೆರಡು ಲಕ್ಷದ ಇಪ್ಪತ್ತೊಂಭತ್ತು ಸಾವಿರದ ನಾಲ್ಕುನೂರು ಮಾತ್ರ) ಗಳ ಟೆಂಡರ್ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:16/07/2008ರ ಟಿಪ್ಪಣಿ.

ತೀರ್ಮಾನ: ಆಯುಕ್ತರವರ ದಿನಾಂಕ:16/07/2008ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

**ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು**

**ವಿಷಯದ ಸಂಖ್ಯೆ:338/2008-09**

Providing cement concrete roads to narrow roads in lanes on OMBR Layout in Ward No.84 ರ ಕಾಮಗಾರಿಯ ಬಗ್ಗೆ.

**ಪ್ರಸ್ತಾವನೆ:**

Providing cement concrete roads to narrow roads in lanes on OMBR Layout in Ward No.84 ರ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತವೆ. ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಕನಿಷ್ಠ ಟೆಂಡರ್‌ದಾರರಾದ ಶ್ರೀ.ಕೆ.ಎಸ್.ಮೈಲೇಗೌಡ, ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.88.69 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007-08ನೇ ಸಾಲಿನ ದರ ಪಟ್ಟಿಯ ಆಧಾರದ ಮೇಲೆ ಮುಖ್ಯ ಅಭಿಯಂತರರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು, ಟೆಂಡರ್‌ಗಿಟ್ಟ ಮೊಬಲಗು ರೂ.88,12,688.00 ಗಳಾಗಿದ್ದು, ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ.ಕೆ.ಎಸ್.ಮೈಲೇಗೌಡ ರವರು ಶೇಕಡ 36.13% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಠ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ ಗುತ್ತಿಗೆದಾರರು ಸಂಧಾನದ ನಂತರ ನಮೂದಿಸಿದ ಶೇಕಡ 20.27% ರಷ್ಟು ಹೆಚ್ಚುವರಿ ದರಗಳು ಸಮರ್ಪಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಸಿಮೆಂಟ್‌ನ ವ್ಯತ್ಯಾಸದ ದರವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.50% ರಷ್ಟು ಹೆಚ್ಚುವರಿ ದರಗಳನ್ನು ನೀಡಿದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಿದ್ಧನಿರುತ್ತೇನೆ ಎಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಪೂರ್ವ) ರವರು ಶಿಪಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತವು (ಟೆಂಡರ್ ಪ್ರೀಮಿಯಂ ಸೇರಿ) ರೂ.1,05,98,878.00 ಗಳಾಗಿದ್ದು, ಸರ್ಕಾರದ ಆದೇಶ ಸಂಖ್ಯೆ ಯು.ಡಿ.ಡಿ/116/ಎಹೆಚ್‌ಡಿ/2002 ದಿನಾಂಕ: 24-01-2003 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಸರ್ಕಾರ ತಂದಿದ್ದು ಇದರಂತೆ ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಯುಕ್ತರು / ಆಡಳಿತಗಾರರ ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ.ಕೆ.ಎಸ್.ಮೈಲೇಗೌಡ ರವರು 2007-08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಸಿಮೆಂಟ್‌ನ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.50% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.1,05,98,878.00 (ರೂ.ಒಂದು ಕೋಟಿ ಐದು ಲಕ್ಷದ ತೊಂಭತ್ತೆಂಟು ಸಾವಿರದ ಎಂಟುನೂರು ಎಪ್ಪತ್ತೆಂಟು ಮಾತ್ರ) ಗಳ ಟೆಂಡರ್ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15/07/2008ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:15/07/2008ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು**

ವಿಷಯದ ಸಂಖ್ಯೆ:339/2008-09

Providing Asphalting to Gangadhar Chetty road and tank bund road via ward memorial circle in ward No.81ರ ಕಾಮಗಾರಿಯ ಬಗ್ಗೆ.

ಪ್ರಸ್ತಾವನೆ:

Providing Asphalting to Gangadhar Chetty road and tank bund road via ward memorial circle in ward No.81ರ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತದೆ. ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಕನಿಷ್ಟ ಟೆಂಡರ್‌ದಾರರಾದ ಶ್ರೀ.ಕೆ.ಎನ್.ಶ್ರೀನಿವಾಸ ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.50.00 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007-08ನೇ ಸಾಲಿನ ದರ ಪಟ್ಟಿಯ ಆಧಾರದ ಮೇಲೆ ಜಂಟಿ ಆಯುಕ್ತರು ಮತ್ತು ಮುಖ್ಯ ಅಭಿಯಂತರರು (ಪೂರ್ವ) ರವರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು, ಟೆಂಡರ್‌ಗಿಟ್ಟ ಮೊಬಲಗು ರೂ.49.79.340.00 ಗಳಾಗಿದ್ದು ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ.ಕೆ.ಎನ್.ಶ್ರೀನಿವಾಸ ರವರು ಶೇಕಡ 75.25% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಠ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ ಗುತ್ತಿಗೆದಾರರು ಸಂಧಾನದ ನಂತರ ಶೇಕಡ 41.90% ರಷ್ಟು ಹೆಚ್ಚುವರಿ ದರಗಳು ಸಮರ್ಪಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಬಿಟುಮಿನ್ ದರದ ವ್ಯತ್ಯಾಸವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.50% ರಷ್ಟು ಹೆಚ್ಚುವರಿ ದರಗಳನ್ನು ನೀಡಿದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಿದ್ಧನಿರುತ್ತೇನೆ ಎಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಪೂರ್ವ) ರವರು ಶಿಪಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತವು (ಟೆಂಡರ್ ಪ್ರೀಮಿಯಂ ಸೇರಿ) ರೂ.70,65,812.04 ಗಳಾಗಿದ್ದು ಸರ್ಕಾರದ ಆದೇಶ ಸಂಖ್ಯೆ ಯು.ಡಿ.ಡಿ/116/ಎಹೆಚ್‌ಡಿ/2002 ದಿನಾಂಕ: 24-01-2003 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಸರ್ಕಾರ ತಂದಿದ್ದು ಇದರಂತೆ ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಯುಕ್ತರು / ಆಡಳಿತಗಾರರ ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ.ಕೆ.ಎನ್.ಶ್ರೀನಿವಾಸ ರವರು 2007-08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಡಾಂಬರಿನ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.50% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.70,65,812.04 (ರೂ.ಎಪ್ಪತ್ತು ಲಕ್ಷದ ಅರವತ್ತೈದು ಸಾವಿರದ ಎಂಟುನೂರು ಹನ್ನೆರಡು ಮತ್ತು ಪೈಸೆ ನಾಲ್ಕು ಮಾತ್ರ) ಗಳ ಟೆಂಡರ್ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15/07/2008ರ ಟಿಪ್ಪಣಿ.

ತೀರ್ಮಾನ: ಆಯುಕ್ತರವರ ದಿನಾಂಕ:15/07/2008ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು

**ವಿಷಯದ ಸಂಖ್ಯೆ:340/2008–09**

ವಾರ್ಡ್ ಸಂಖ್ಯೆ:88 ರ ಹೆಚ್.ಆರ್.ಬಿ.ಆರ್.ಬಡಾವಣೆ 1ನೇ ಬ್ಲಾಕ್, 7ನೇ ಮುಖ್ಯರಸ್ತೆಯಲ್ಲಿನ ರಸ್ತೆ ಬದಿ ಚರಂಡಿ ಹಾಗೂ ಪಾದಚಾರಿ ಮಾರ್ಗ ಅಭಿವೃದ್ಧಿ ಪಡಿಸುವ ಕಾಮಗಾರಿ ಬಗ್ಗೆ.

**ಪ್ರಸ್ತಾವನೆ:**

ವಾರ್ಡ್ ಸಂಖ್ಯೆ:88 ರ ಹೆಚ್.ಆರ್.ಬಿ.ಆರ್.ಬಡಾವಣೆ 1ನೇ ಬ್ಲಾಕ್, 7ನೇ ಮುಖ್ಯರಸ್ತೆಯಲ್ಲಿನ ರಸ್ತೆ ಬದಿ ಚರಂಡಿ ಹಾಗೂ ಪಾದಚಾರಿ ಮಾರ್ಗ ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತವೆ. ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಕನಿಷ್ಠ ಟೆಂಡರ್‌ದಾರರಾದ ಶ್ರೀ.ಟಿ.ಗಿರಿರಾಜ್, ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.95.90 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007–08ನೇ ಸಾಲಿನ ದರಪಟ್ಟಿಯ ಆಧಾರದ ಮೇಲೆ ಮುಖ್ಯ ಅಭಿಯಂತರರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು,ಟೆಂಡರ್‌ಗಿಟ್ಟ ಮೊಬಲಗು ರೂ.93,52,840.00, ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ.ಟಿ.ಗಿರಿರಾಜ್ ರವರು ಶೇಕಡ 60.70% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಠ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ, ಗುತ್ತಿಗೆದಾರರು ಸಂಧಾನದ ನಂತರ ಶೇಕಡ 39.02% ರಷ್ಟು ಹೆಚ್ಚುವರಿ ದರಗಳು ಸಮಪರ್ಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಸಿಮೆಂಟ್‌ನ ವ್ಯತ್ಯಾಸದ ದರವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.50% ರಷ್ಟು ಹೆಚ್ಚುವರಿ ದರಗಳನ್ನು ನೀಡಿದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಿದ್ದನಿರುತ್ತೇನೆಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಪೂರ್ವ) ರವರು ಅನುಮೋದನೆಗೆ ಶಿಫಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತ (ಟೆಂಡರ್ ಪ್ರೀಮಿಯಂ ಸೇರಿ) ರೂ.1,30,02,299.00 ಗಳಾಗಿದ್ದು, ಸರ್ಕಾರದ ಆದೇಶ ಸಂಖ್ಯೆ:ಯುಡಿಡಿ/116/ಎಹೆಚ್‌ಡಿ/2002, ದಿನಾಂಕ:24/01/2003 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ, ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಸರ್ಕಾರ ತಂದಿದ್ದು, ಇದರಂತೆ ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಯುಕ್ತರು/ಆಡಳಿತಗಾರರು ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ.ಟಿ.ಗಿರಿರಾಜ್, ರವರು 2007–08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಸಿಮೆಂಟ್‌ನ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.50% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.1,30,02,299.00 (ರೂ.ಒಂದು ಕೋಟಿ ಮೂವತ್ತು ಲಕ್ಷದ ಎರಡು ಸಾವಿರದ ಇನ್ನೂರ ತೊಂಭತ್ತೊಂಭತ್ತು ಮಾತ್ರ) ಗಳ ಟೆಂಡರ್ ಅನುಮೋದಿಸಲು ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:15/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು

ವಿಷಯದ ಸಂಖ್ಯೆ:341/2008-09

ವಾರ್ಡ್ ಸಂಖ್ಯೆ:88 ರ ಹೆಚ್.ಆರ್.ಬಿ.ಆರ್.ಬಡಾವಣೆ 1ನೇ ಬ್ಲಾಕ್, 3ನೇ ಅಡ್ಡರಸ್ತೆಯಲ್ಲಿನ ರಸ್ತೆ ಬದಿ ಚರಂಡಿ ಹಾಗೂ ಪಾದಚಾರಿ ಮಾರ್ಗ ಅಭಿವೃದ್ಧಿ ಪಡಿಸುವ ಕಾಮಗಾರಿ ಬಗ್ಗೆ.

ಪ್ರಸ್ತಾವನೆ:

ವಾರ್ಡ್ ಸಂಖ್ಯೆ:88 ರ ಹೆಚ್.ಆರ್.ಬಿ.ಆರ್.ಬಡಾವಣೆ 1ನೇ ಬ್ಲಾಕ್, 3ನೇ ಅಡ್ಡರಸ್ತೆಯಲ್ಲಿನ ರಸ್ತೆ ಬದಿ ಚರಂಡಿ ಹಾಗೂ ಪಾದಚಾರಿ ಮಾರ್ಗ ಅಭಿವೃದ್ಧಿ ಪಡಿಸುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತವೆ. ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಕನಿಷ್ಠ ಟೆಂಡರ್‌ದಾರರಾದ ಮೆ: ದರ್ಶನ್ ಎಂಟರ್‌ಪ್ರೈಸಸ್, ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.82.40 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007-08ನೇ ಸಾಲಿನ ದರಪಟ್ಟಿಯ ಆಧಾರದ ಮೇಲೆ ಮುಖ್ಯ ಅಭಿಯಂತರರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು, ಟೆಂಡರ್‌ಗಿಟ್ಟ ಮೊಬಲಗು ರೂ.80,23,948.00, ಗಳಾಗಿದ್ದು, ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಮೆ:ದರ್ಶನ್ ಎಂಟರ್‌ಪ್ರೈಸಸ್, ರವರು ಶೇಕಡ 64.57% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಠ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ, ಗುತ್ತಿಗೆದಾರರು ಸಂಧಾನದ ನಂತರ ನಮೂದಿಸಿದ ಶೇಕಡ 41.87% ರಷ್ಟು ಹೆಚ್ಚುವರಿ ದರಗಳು ಸಮಪರ್ಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಸಿಮೆಂಟ್‌ನ ವ್ಯತ್ಯಾಸದ ದರವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.50% ರಷ್ಟು ಹೆಚ್ಚುವರಿ ದರಗಳನ್ನು ನೀಡಿದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಿದ್ದನಿರುತ್ತೇನೆಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಪೂರ್ವ) ರವರು ಶಿಫಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತ (ಟೆಂಡರ್ ಪ್ರೀಮಿಯಂ ಸೇರಿ) ರೂ.1,13,83,222.00 ಗಳಾಗಿದ್ದು, ಸರ್ಕಾರದ ಆದೇಶ ಸಂಖ್ಯೆ:ಯುಡಿಡಿ/116/ಎಹೆಚ್‌ಡಿ/2002, ದಿನಾಂಕ:24/01/2003 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ, ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಸರ್ಕಾರ ತಂದಿದ್ದು, ಇದರಂತೆ ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಯುಕ್ತರು/ಆಡಳಿತಗಾರರು ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರ ಸಂಸ್ಥೆಯಾದ ಮೆ:ದರ್ಶನ್ ಎಂಟರ್‌ಪ್ರೈಸಸ್, ರವರು 2007-08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಸಿಮೆಂಟ್‌ನ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.50% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.1,13,83,222.00 (ರೂ.ಒಂದು ಕೋಟಿ ಹದಿಮೂರು ಲಕ್ಷದ ಎಂಭತ್ತಮೂರು ಸಾವಿರದ ಇನ್ನೂರ ಇಪ್ಪತ್ತೆರಡು ಮಾತ್ರ) ಗಳ ಟೆಂಡರ್ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:14/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:14/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು**

**ವಿಷಯದ ಸಂಖ್ಯೆ:342/2008-09**

ಲಾಲ್ ಬಹಾದ್ದೂರ್ ಮೌಂಟೆನೀರಿಂಗ್ ಇನ್‌ಸ್ಟಿಟ್ಯೂಟ್ ರವರಿಗೆ ಅನುದಾನ/ಸಹಾಯಧನ ಮಂಜೂರು ಮಾಡುವ ಬಗ್ಗೆ.

**ಪ್ರಸ್ತಾವನೆ:**

ಲಾಲ್ ಬಹಾದ್ದೂರ್ ಮೌಂಟೆನೀರಿಂಗ್ ಇನ್‌ಸ್ಟಿಟ್ಯೂಟ್, ಶಾಸ್ತ್ರೀಜಿ ಭವನ, ನಂ.08, ಸುಶೀಲ ರಸ್ತೆ, ಚಿಕ್ಕಮಾವಳ್ಳಿ, ಬಸವನಗುಡಿ ಅಂಚೆ, ಬೆಂಗಳೂರು-560 004 ರವರು ಮನವಿ ಸಲ್ಲಿಸಿ, ತಮ್ಮ ಸಂಸ್ಥೆಯು ಹಲವು ದಶಕಗಳಿಂದ ನಗರ ಹಾಗೂ ಜಿಲ್ಲೆಗಳಲ್ಲಿ ಸಾಹಸ ಶಿಕ್ಷಣದ ಚಟುವಟಿಕೆ ನಡೆಸಿಕೊಂಡು ಬರುತ್ತಿದೆ ಎಂದು ತಿಳಿಸಿ, 2004-05ನೇ ಸಾಲಿನ ಲೆಕ್ಕ ಪರಿಶೋಧನ ವರದಿ ಮತ್ತು ಸಂಸ್ಥೆಯ ಕಾರ್ಯಚಟುವಟಿಕೆಗಳನ್ನು ಕುರಿತು ವೃತ್ತ ಪತ್ರಿಕೆಗಳಲ್ಲಿ ಪ್ರಕಟವಾದ ಪತ್ರಿಕಾ ವರದಿಗಳ ನಕಲು ಪ್ರತಿಗಳನ್ನು ಸಲ್ಲಿಸಿರುತ್ತಾರೆ. ಪಾಲಿಕೆ ವತಿಯಿಂದ 2007-08ನೇ ಸಾಲಿಗೆ ರೂ.50,000/- ಅನುದಾನವನ್ನು ಮಂಜೂರು ಮಾಡಲು ಕೋರಿರುತ್ತಾರೆ.

ತತ್ಸಂಬಂಧವಾಗಿ, ಮೇಲಿನ ಅಂಶಗಳನ್ನು ಮಾನ್ಯ ಆಡಳಿತಗಾರರವರ ಗಮನಕ್ಕೆ ತರುತ್ತಾ ಪ್ರಸ್ತಾಪಿತ ಸಂಸ್ಥೆಯ ಕಾರ್ಯಚಟುವಟಿಕೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, 2008-09 ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ:24, ಸಂಸ್ಕೃತಿ ಮತ್ತು ಕ್ರೀಡೆ, ಕೊಡುಗೆ ಮತ್ತು ಸಹಾಯಾನುದಾನದಡಿ ಮೀಸಲಿರಿಸಿರುವ ರೂ.300.00 ಲಕ್ಷಗಳ ಅನುದಾನದಲ್ಲಿ ರೂ.25,000/- ಗಳ ಅನುದಾನವನ್ನು ಪ್ರಸ್ತಾಪಿತ ಸಂಸ್ಥೆಗೆ 2008-09ನೇ ಸಾಲಿಗೆ ಮಂಜೂರು ಮಾಡುವ ಸಂಬಂಧ ಸೂಕ್ತ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15/07/2008 ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:15/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು

**ವಿಷಯದ ಸಂಖ್ಯೆ:343/2008-09**

ವಾರ್ಡ್:ಸಂಖ್ಯೆ:88ರ ಹೆಚ್.ಆರ್.ಬಿ.ಆರ್.ಬಡಾವಣೆ 1ನೇ ಬ್ಲಾಕ್, 2ನೇ ಅಡ್ಡ ರಸ್ತೆಯಲ್ಲಿನ ರಸ್ತೆ ಬದಿ ಚರಂಡಿ ಹಾಗೂ ಪಾದಚಾರಿ ಮಾರ್ಗ ಅಭಿವೃದ್ಧಿಪಡಿಸುವ ಕಾಮಗಾರಿ ಬಗ್ಗೆ.

**ಪ್ರಸ್ತಾಪನೆ:**

ವಾರ್ಡ್:ಸಂಖ್ಯೆ:88ರ ಹೆಚ್.ಆರ್.ಬಿ.ಆರ್.ಬಡಾವಣೆ 1ನೇ ಬ್ಲಾಕ್, 2ನೇ ಅಡ್ಡ ರಸ್ತೆಯಲ್ಲಿನ ರಸ್ತೆ ಬದಿ ಚರಂಡಿ ಹಾಗೂ ಪಾದಚಾರಿ ಮಾರ್ಗ ಅಭಿವೃದ್ಧಿಪಡಿಸುವ ಕಾಮಗಾರಿಗೆ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಮೊದಲನೇ ಕರೆಯಲ್ಲಿ ಟೆಂಡರ್ ಆಹ್ವಾನಿಸಿರುತ್ತಾರೆ. ಗುತ್ತಿಗೆದಾರರಿಂದ 02 ಟೆಂಡರ್‌ಗಳು ಸ್ವೀಕೃತವಾಗಿದ್ದು, 02 (ಎರಡು) ಟೆಂಡರ್‌ದಾರರ ತಾಂತ್ರಿಕ ಬಿಡ್ ಸಿಂಧುವಾಗಿರುತ್ತವೆ. ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಕನಿಷ್ಟ ಟೆಂಡರ್‌ದಾರರಾದ ಶ್ರೀ.ಎನ್.ಬಿ.ನಾಗರಾಜು, ಗುತ್ತಿಗೆದಾರರ ಟೆಂಡರ್ ಅನ್ನು ಅನುಮೋದನೆಗಾಗಿ ಮಂಡಿಸಿರುತ್ತಾರೆ.

ರೂ.48.70 ಲಕ್ಷಗಳ ಕಾಮಗಾರಿಯ ಅಂದಾಜು ಪಟ್ಟಿಗೆ 2007-08ನೇ ಸಾಲಿನ ದರ ಪಟ್ಟಿಯ ಆಧಾರದ ಮೇಲೆ ಜಂಟಿ ಆಯುಕ್ತರು ಮತ್ತು ಮುಖ್ಯ ಅಭಿಯಂತರರು ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ನೀಡಿದ್ದು, ಟೆಂಡರ್‌ಗಿಟ್ಟ ಮೊಬಲಗು ರೂ.48,69,190.00 ಗಳಾಗಿದ್ದು ಮಂಜೂರಾದ ದರಗಳಿಗೆ ಗುತ್ತಿಗೆದಾರರಾದ ಶ್ರೀ.ಎನ್.ಬಿ.ನಾಗರಾಜು ರವರು ಶೇಕಡ 58.52% ರಷ್ಟು ಹೆಚ್ಚಿನ ದರಗಳನ್ನು ನಮೂದಿಸಿದ್ದು, ಕನಿಷ್ಠ ಟೆಂಡರ್‌ದಾರರಾಗಿರುತ್ತಾರೆ. ನಮೂದಿಸಿದ ದರಗಳು ಹೆಚ್ಚಿನದಾಗಿದ್ದರಿಂದ ಕಾರ್ಯಪಾಲಕ ಅಭಿಯಂತರರು (ಭಾರತೀನಗರ) ರವರು ಗುತ್ತಿಗೆದಾರರೊಡನೆ ಸಂಧಾನ ನಡೆಸಲಾಗಿ, ಗುತ್ತಿಗೆದಾರರು ಸಂಧಾನದ ನಂತರ ನಮೂದಿಸಿದ ಶೇಕಡ 37.72% ರಷ್ಟು ಹೆಚ್ಚುವರಿ ದರಗಳು ಸಮರ್ಪಕವಾಗಿದ್ದು ಮತ್ತು ಲೋಕೋಪಯೋಗಿ ಇಲಾಖೆಯಿಂದ ಇತ್ತೀಚೆಗೆ ಹೊರಡಿಸಿದ ಸುತ್ತೋಲೆಯಂತೆ ಸಿಮೆಂಟ್‌ನ ವ್ಯತ್ಯಾಸದ ದರವನ್ನು ಪರಿಗಣಿಸಿ ನಮೂದಿಸಿದ ದರಗಳಾದ ಶೇಕಡ 14.50% ರಷ್ಟು ಹೆಚ್ಚುವರಿ ದರಗಳನ್ನು ನೀಡಿದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಸಿದ್ಧನಿರುತ್ತೇನೆ ಎಂದು ಸಂಧಾನ ಪತ್ರ ನೀಡಿರುತ್ತಾರೆ. ಸದರಿ ಟೆಂಡರ್ ಅನ್ನು ಅನುಮೋದಿಸಲು ಮುಖ್ಯ ಅಭಿಯಂತರರು (ಪೂರ್ವ) ರವರು ಶಿಫಾರಸ್ಸು ಮಾಡಿದ್ದು, ಮಾನ್ಯ ಆಯುಕ್ತರವರು ಒಪ್ಪಿಗೆ ನೀಡಿರುತ್ತಾರೆ.

ಮೇಲಿನ ಅಂಶಗಳನ್ನು ಪರಿಶೀಲಿಸಲಾಗಿ ಟೆಂಡರ್‌ನ ಒಟ್ಟು ಮೊತ್ತವು (ಟೆಂಡರ್ ಪ್ರೀಮಿಯಂ ಸೇರಿ) ರೂ67,05,906.00 ಗಳಾಗಿದ್ದು ಸರ್ಕಾರದ ಆದೇಶ ಸಂಖ್ಯೆ ಯು.ಡಿ.ಡಿ/116/ಎಹೆಚ್‌ಡಿ/2002 ದಿನಾಂಕ: 24-01-2003 ರೀತ್ಯಾ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ ನಿಯಮಗಳು 1977 ನಿಯಮ 6ಕ್ಕೆ ಆರ್ಥಿಕ ಅಧಿಕಾರಗಳ ತಿದ್ದುಪಡಿಯನ್ನು ಸರ್ಕಾರ ತಂದಿದ್ದು, ಇದರಂತೆ ಟೆಂಡರ್ ಅಂಗೀಕರಿಸುವ ಅಧಿಕಾರ ಮಾನ್ಯ ಆಯುಕ್ತರು / ಆಡಳಿತಗಾರರ ರವರ ವ್ಯಾಪ್ತಿಯಲ್ಲಿರುತ್ತದೆ.

ಈ ಹಿನ್ನಲೆಯಲ್ಲಿ ಸದರಿ ಕಾಮಗಾರಿಯ ಟೆಂಡರ್ ಗುತ್ತಿಗೆದಾರರಾದ ಶ್ರೀ.ಎನ್.ಬಿ.ನಾಗರಾಜು ರವರು 2007-08ನೇ ಸಾಲಿನ ದರಪಟ್ಟಿಯ ಮೇಲೆ ನಮೂದಿಸಿದ ದರಗಳಿಗೆ ಸಿಮೆಂಟ್‌ನ ವ್ಯತ್ಯಾಸದ ದರಗಳನ್ನು ಪರಿಗಣಿಸಿ ಬಂದಂತಹ ಶೇಕಡ 14.50% ರಷ್ಟು ಹೆಚ್ಚುವರಿ ದರಗಳು ಅಥವಾ ರೂ.67,05,906.00 (ರೂ.ಅರವತ್ತೇಳು ಲಕ್ಷದ ಐದು ಸಾವಿರದ ಒಂಭೈನೂರ ಆರು ಮಾತ್ರ) ಗಳ ಟೆಂಡರ್ ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15/07/2008ರ ಟಿಪ್ಪಣಿ.

**ತೀರ್ಮಾನ:** ಆಯುಕ್ತರವರ ದಿನಾಂಕ:15/07/2008ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು.

**ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು**

**ವಿಷಯದ ಸಂಖ್ಯೆ:344/08-09**

ಯಲಹಂಕ ಉಪನಗರದ ಉಪ ವಿಭಾಗದಲ್ಲಿ ಬರುವ 5ನೇ ಹಂತದ ಪಾರ್ಕ್‌ನಲ್ಲಿ ಬ್ಯಾಸ್ಕೆಟ್ ಬಾಲ್ ಮತ್ತು ವಾಲಿಬಾಲ್ ಕೋರ್ಟ್ ಅಂಗಳಗಳನ್ನು ಸಮತಟ್ಟು ಮಾಡಿ ಕಬ್ಬಿಣದ ಕಂಬಗಳನ್ನು ಒದಗಿಸುವ ಕಾಮಗಾರಿಯ ಬಗ್ಗೆ.

**ಪ್ರಸ್ತಾವನೆ:**

ಜಂಟಿ ಆಯುಕ್ತರು (ಬ್ಯಾಟರಾಯನಪುರ) ವಲಯ ವ್ಯಾಪ್ತಿಯ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ) ಉಪ ವಿಭಾಗದಲ್ಲಿ ಸಾಕಷ್ಟು ಪಾರ್ಕ್‌ಗಳಿದ್ದು, ಇವುಗಳಲ್ಲಿ ಯಲಹಂಕ ಉಪನಗರದ ಉಪ ವಿಭಾಗದಲ್ಲಿ ಬರುವ 407 ರ 5ನೇ ಹಂತದ ಪಾರ್ಕ್‌ನಲ್ಲಿ ಕಾಲುದಾರಿ, ಬಾಸ್ಕೆಟ್ ಬಾಲ್ ಮತ್ತು ವಾಲಿಬಾಲ್ ಕೋರ್ಟ್ ಅಂಗಳಗಳಲ್ಲಿ ಕಬ್ಬಿಣದ ಕಂಬಗಳನ್ನು ಒದಗಿಸಲು ಸಾರ್ವಜನಿಕರು ಒತ್ತಾಯಿಸಿರುತ್ತಾರೆ.

ಕಾಮಗಾರಿಯು ಅತ್ಯಾವಶ್ಯಕವಾಗಿರುವುದರಿಂದ ಕಾರ್ಯಪಾಲಕ ಅಭಿಯಂತರರು (ಯಲಹಂಕ) ವಿಭಾಗ ರವರು ಪ್ರಚಲಿತ ಮಾರುಕಟ್ಟೆಯಲ್ಲಿನ ಮತ್ತು ಕೋಟೇಷನ್ ದರದ ಅಂದಾಜು ಪಟ್ಟಿಯನ್ನು 2007-08ನೇ ಸಾಲಿನ ದರಪಟ್ಟಿ ದರಗಳ ಆಧಾರದ ಮೇಲೆ ತಯಾರಿಸಿದ್ದು, ಸದರಿ ಕಾಮಗಾರಿಯು ಬ್ಯಾಟರಾಯನಪುರ ವಲಯ ಜಂಟಿ ಆಯುಕ್ತರು/ಮು.ಅ/ಅ.ಅ. ರವರು ನೀಡಿದ ಮೌಖಿಕ ನಿರ್ದೇಶನದ ಹಿನ್ನಲೆಯಲ್ಲಿ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿ ಕೋರಿರುತ್ತಾರೆ. ಹಾಗೂ ಕಾಮಗಾರಿಯ ತುರ್ತಾಗಿರುವುದರಿಂದ ಕೆಲಸವನ್ನು ಈಗಾಗಲೇ ಇಲಾಖಾ ವತಿಯಿಂದ ಪ್ರಾರಂಭಿಸಲಾಗಿದ್ದು. ಈಗಾಗಲೇ ಹಾಗೂ ಸುಮಾರು 90% ಕೆಲಸ ಮುಗಿದಿರುತ್ತದೆ ಎಂದು ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ) ವಿಭಾಗ ರವರು ವರದಿ ಮಾಡಿರುತ್ತಾರೆ.

ಈ ಹಿನ್ನಲೆಯಲ್ಲಿ ಕಾಮಗಾರಿಯು ತುರ್ತಾಗಿರುವುದರಿಂದ ಕಾರ್ಯಪಾಲಕ ಅಭಿಯಂತರರು (ಯಲಹಂಕ) ವಿಭಾಗ ರವರು ತಯಾರಿಸಿರುವ ಮೇಲಿನ ಕಾಮಗಾರಿಯ ಅಂದಾಜು ಮೊತ್ತ ರೂ.4,90,000-00 ಗಳ ಕೆಲಸವನ್ನು ಇಲಾಖಾವತಿಯಿಂದ ಈಗಾಗಲೇ ಪ್ರಾರಂಭಿಸಲಾಗಿರುವ ಪೂರ್ವಭಾವಿ ಕ್ರಮವನ್ನು ಸ್ಥಿರೀಕರಿಸಲು ಅನುಮೋದನೆ ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಅಯುಕ್ತರವರ ದಿನಾಂಕ:10/07/2008 ರ ಟಿಪ್ಪಣಿ.

**ತೀರ್ಮಾನ:** ಅಯುಕ್ತರವರ ದಿನಾಂಕ:10/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಕಾಮಗಾರಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:22/07/2008 ರ ನಡವಳಿಗಳು

ವಿಷಯದ ಸಂಖ್ಯೆ:345/2008-09

ಶಾಂತಿನಗರ ವಿಭಾಗ-1 ರ ಎಸ್.ಟಿ.ಬೆಡ್ ಪ್ರದೇಶದ ರಸ್ತೆಗಳಿಗೆ ಸಿಮೆಂಟ್ ಕಾಂಕ್ರೀಟ್ ಮಾಡುವ ಕಾಮಗಾರಿ ಬಗ್ಗೆ.

ಪ್ರಸ್ತಾವನೆ:

| ಕ್ರ.ಸಂ. | ವಾರ್ಡ್ ಸಂಖ್ಯೆ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|---|
| 1 | 68 | Providing Concereting to roads as S.T. Bed area (8th Cross Road, 7th to 10th A Main Roads) | 94.50 |
| 2 | 68 | Providing Cement Concrete roads at S.T.Bed area (2nd to 6th Cross Roads and 4th Main Road) | 92.25 |
| 3 | 68 | Providing Cement Concrete roads at S.T.Bed area (1st A,B & C Main and 1st Cross Road) | 90.00 |
| 4 | 68 | Providing Concreting to roads at S.T.Bed area (1st Main & 3rd Main Roads) | 96.50 |
| 5 | 68 | Providing Concreting roads at S.T.Bed area (5th & 6th Main Roads) | 71.50 |
| 6 | 68 | Providing Concreting roads at S.T.Bed area (7th Cross and 2nd Main Road) | 50.00 |

ಕಾರ್ಯಪಾಲಕ ಅಭಿಯಂತರರು (ಶಾಂತಿನಗರ-1) ರವರು ವಾರ್ಡ್: 68ರ ಎಸ್.ಟಿ. ಬೆಡ್ ಪ್ರದೇಶದ ರಸ್ತೆಗಳಿಗೆ ಸಿಮೆಂಟ್ ಕಾಂಕ್ರೀಟ್ ಮಾಡುವ ಸಲುವಾಗಿ ಆರು (6) ಕಾಮಗಾರಿಗಳಿಗೆ ಅಂದಾಜು ಪಟ್ಟಿಯನ್ನು 2007-08 ನೇ ಸಾಲಿನ ದರಪಟ್ಟಿಯಂತೆ ತಯಾರಿಸಿ ಅನುಮೋದನೆಗಾಗಿ ಸಲ್ಲಿಸಲಾಗಿದೆ. ಈ ಪ್ರದೇಶವು ತಗ್ಗು ಪ್ರದೇಶವಾಗಿದ್ದು ಮಳೆಗಾಲದಲ್ಲಿ ರಸ್ತೆಯಲ್ಲಿ ನೀರು ನಿಲ್ಲುತ್ತದೆ. ಆದ್ದರಿಂದ ಡಾಂಬರೀಕರಣ ಮಾಡುವ ಬದಲಾಗಿ ಕಾಂಕ್ರೀಟ್ ರಸ್ತೆಯನ್ನು ಮಾಡುವುದು ಸಮಂಜಸವಾಗಿರುತ್ತದೆ. ಈ ಪ್ರದೇಶವು ಕಪ್ಪು ಮಣ್ಣಿನ ಪ್ರದೇಶವಾಗಿದ್ದು ಕಾಂಕ್ರೀಟ್ ರಸ್ತೆ ಮಾಡುವುದರಿಂದ ರಸ್ತೆಗಳು ತುಂಬಾ ಬಾಳಿಕೆ ಬರುತ್ತದೆ. ಇದಕ್ಕೆ ಸಂಬಂಧಪಟ್ಟ ಪ್ರದೇಶದ ನಕ್ಷೆಯನ್ನು ತಯಾರಿಸಿದ್ದು, ಅಗತ್ಯವಾದ ಎಲ್ಲಾ ಅಂಶಗಳನ್ನೊಳಗೊಂಡಂತೆ ಅಂದಾಜು ಪಟ್ಟಿಗಳನ್ನು ತಯಾರಿಸಲಾಗಿದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆಯನ್ನು ಕೋರಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15/07/2008 ರ ಟಿಪ್ಪಣಿ.

ತೀರ್ಮಾನ: ಆಯುಕ್ತರವರ ದಿನಾಂಕ:15/07/2008 ರ ಟಿಪ್ಪಣಿಯನ್ನು ಒಪ್ಪಿದೆ.

(ದಿಲೀಪ್ ರಾವ್)
ಆಡಳಿತಗಾರರು

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 22/07/2008ರ ನಡವಳಿಗಳು

**ವಿಷಯದ ಸಂಖ್ಯೆ:346/2008-09**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್-4ರ ವ್ಯಾಪ್ತಿಯಲ್ಲಿ ಬರುವ ಐ.ಟಿ.ಐ. ಲೇಔಟಿನ ನಿವೇಶನ ಸಂಖ್ಯೆ:28 ಮತ್ತು 29 ರಲ್ಲಿ ಸುಮಾರು 969 ಚ.ಅ. ಜಾಗವನ್ನು ಮಳೆ ನೀರಿನ ಒಳಚರಂಡಿಗೆ ಭೂಸ್ವಾಧೀನ ಪಡಿಸಿಕೊಳ್ಳುವ ಬಗ್ಗೆ.

**ಪ್ರಸ್ತಾವನೆ:**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್-4ರ ವ್ಯಾಪ್ತಿಯಲ್ಲಿ ಬರುವ ಐ.ಟಿ.ಐ. ಲೇಔಟಿನ ನಿವೇಶನ ಸಂಖ್ಯೆ:28 ಮತ್ತು 29 ರಲ್ಲಿ ಸುಮಾರು 969 ಚ.ಅ. ಜಾಗವನ್ನು ಮಳೆ ನೀರಿನ ಒಳಚರಂಡಿಗೆ ಭೂ-ಸ್ವಾಧೀನಪಡಿಸಿಕೊಳ್ಳಲು ಮುಖ್ಯ ಅಭಿಯಂತರರು (ಎಸ್.ಡಬ್ಲ್ಯೂ.ಡಿ.) ರವರು ಶಿಫಾರಸ್ಸು ಮಾಡಿದ್ದು, ನಿವೇಶನಗಳ ವಿವರಗಳು ಈ ಕೆಳಕಂಡಂತಿರುತ್ತವೆ.

| ಕ್ರ.ಸಂ. | ಖಾತೆದಾರರ ಹೆಸರು | ವಾರ್ಡ್ ಸಂಖ್ಯೆ | ಲೇಔಟಿನ ಹೆಸರು | ನಿವೇಶನ ಸಂಖ್ಯೆ | ಒಟ್ಟು ವಿಸ್ತೀರ್ಣ ಚ.ಮೀ. | ಮಳೆನೀರು ಒಳ ಚರಂಡಿಗೆ ಭೂ ಸ್ವಾಧೀನಪಡಿಸಿಕೊಳ್ಳಲು ಉದೇಶಿಸಿರುವ ವಿಸ್ತೀರ್ಣ |
|---|---|---|---|---|---|---|
| 1 | 2 | 3 | 4 | 5 | 6 | 7 |
| 1 | ನಾಗರತ್ನ ಬಿನ್ ಬಸಪ್ಪ<br>ನಾಗರಾಜ್ ಬಿನ್ ಬಸಪ್ಪ<br>ಮಂಜುಳ ಬಿನ್ ಬಸಪ್ಪ<br>ವೀಣಾ ಬಿನ್ ಬಸಪ್ಪ | 4 | ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ | 28 | $\frac{24.50+24.20}{2} \times 15.35$ | 483 |
| 2 | ಶ್ರೀ.ಹೆಚ್.ಎನ್.ಸತ್ಯ ನಾರಾಯಣಗುಪ್ತ ಬಿನ್ ಹೆಚ್.ಎನ್.ನಾರಾಯಣ ಶೆಟ್ಟಿ | 4 | ಐ.ಟಿ.ಐ. ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿಯಮಿತ | 29 | $\frac{24.70+24.80}{2} \times 15.35$ | 486 |

ಮುಖ್ಯ ಅಭಿಯಂತರರು (ಎಸ್.ಡಬ್ಲ್ಯೂ.ಡಿ) ರವರ ವರದಿಯನ್ನಾಧರಿಸಿ ಸುಮಾರು 969 ಚ.ಅ. ಜಾಗವನ್ನು ಮಳೆ ನೀರಿನ ಒಳಚರಂಡಿ ನಿರ್ಮಿಸಲು ಭೂಸ್ವಾಧೀನಪಡಿಸಿಕೊಳ್ಳಲು ಮತ್ತು ಆಸ್ತಿಯ ಖಾತೆದಾರರಿಗೆ ಭೂ ಪರಿಹಾರ ಪಾವತಿಸಲು ಉದ್ದೇಶಿಸಲಾಗಿದೆ.

ಕಾರ್ಯಪಾಲಕ ಅಭಿಯಂತರರು (ಮಲ್ಲೇಶ್ವರಂ) ರವರು ಮಾರ್ಗಸೂಚಿ ಬೆಲೆಯನ್ನಾಧರಿಸಿ ವ್ಯಾಲ್ಯೂಯೇಷನ್ ಪಟ್ಟಿಯನ್ನು ಸಲ್ಲಿಸಿರುತ್ತಾರೆ. ಜೊತೆಗೆ ಭೂ-ಸ್ವಾಧೀನ ಕಾಯ್ದೆಯಡಿಯಲ್ಲಿ ಈ ಕೆಳಕಂಡಂತೆ ಲೆಕ್ಕ ಹಾಕಿ ಪಾವತಿಸಬೇಕಾಗಿರುತ್ತದೆ.

. . . 2